ಭೂ ನ್ಯಾಯ ಮಂಡಳಿ, ಆಶ್ರಯ ಅಕ್ರಮ ಸಕ್ರಮ ಸಮಿತಿಗಳ ಬಗ್ಗೆ

687 - ಶ್ರೀ ಬಿ. ರಮಾನಾಥ ರೈ (ಬಂಟ್ವಾಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಭೂ ನ್ಯಾಯ ಮಂಡಳಿ ಆಶ್ರಯ, ಅಕ್ರಮ ಸಕ್ರಮ ಸಮಿತಿಗಳು ಇಲ್ಲದೆ ಜನರಿಗೆ ಆಗುವ ತೊಂದರೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಇದರ ಪುನರ್ ರಚಿಸುವ ಬಗ್ಗೆ ಸರ್ಕಾರವು ಕ್ರಮ ಕೈಗೊಂಡಿದೆಯೇ?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) ಹೌದು.

ಆ) ಭೂ ನ್ಯಾಯ ಮಂಡಳಿ ಮತ್ತು ಬಗರ್ ಹುಕುಂ ಸಕ್ರಮೀಕರಣ ಸಮಿತಿಗಳನ್ನು ಸಧ್ಯದಲ್ಲೇ ಪುನರ್ ರಚಿಸಲಾಗುವುದು.

ಸಹಕಾರಿ ಬ್ಯಾಂಕುಗಳ ಸಾಲ ಮನ್ನಾ ಕುರಿತು

636 - ಶ್ರೀ ರಮಾನಾಥ ರೈ (ಬಂಟ್ವಾಳ) : ಮಾನ್ಯ ಸಹಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಬ್ಯಾಂಕುಗಳಲ್ಲಿ ಪಡೆದ ಸಾಲವನ್ನು ಸಾಲ ಮನ್ನಾ ಯೋಜನೆಯಡಿ ಮನ್ನಾ ಮಾಡಿದ ಬ್ಯಾಂಕುಗಳಿಗೆ ಸರಕಾರ ಹಣವನ್ನು ಭರಿಸುವ ಉಲೋಜನೆ ಇದೆಯೇ?

ಆ) ಇದ್ದಲ್ಲಿ ಈ ಹಣವನ್ನು ಯಾವಾಗ ಭರಿಸಲಾಗುವುದು?

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಸಚಿವರು) :

ಅ) ಸಾಲ ಮನ್ನಾ ಮಾಡುವ ಯಾವುದೇ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಅನಧಿಕೃತ ಮ್ಯಾಕ್ಸಿ ಕ್ಯಾಬ್‌ಗಳ ತಡೆಗೆ ಕ್ರಮ

444 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಷ್ಟ್ರೀಕೃತ ಮಾರ್ಗಗಳಲ್ಲಿ ಅನಧಿಕೃತವಾಗಿ ಮ್ಯಾಕ್ಸಿ ಕ್ಯಾಬ್‌ಗಳು ಓಡಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಇದನ್ನು ತಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ? ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?